**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಹೆಚ್ಚು ಮತ್ತು ರೂ.10.00 ಲಕ್ಷಗಳಗಿಂತ ಒಳಗಿರುವ ಸಿ.ಇ.ಟಿ. ಮೂಲಕ ತಾಂತ್ರಿಕ ಮತ್ತು ವೈದ್ಯಕೀಯ ಕೋರ್ಸ್‌ಗಳಿಗೆ ಆಯ್ಕೆಯಾಗಿರುವ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಶೇ.100 ರಷ್ಟು ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಗಳಿಂದ ಮರುಪಾವತಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಸಕಇ 178 ಪಕವಿ 2015 ದಿನಾಂಕ: 31-12-2015

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಹಿಂದಿನ ವರ್ಷ 2015-16ರಲ್ಲಿ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಹೆಚ್ಚು ಮತ್ತು ರೂ.10.00 ಲಕ್ಷಗಳಿಗಿಂತ ಒಳಗಿರುವ ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳಿಗೆ ಶೇ.50 ರಷ್ಟು ಶುಲ್ಕ ಮರುಪಾವತಿ ಮಾಡಲು ಆದೇಶ ಆಗಿರುತ್ತದೆ. ಆದರೆ, ಸಿಇಟಿ ಮೂಲಕ ತಾಂತ್ರಿಕ ಮತ್ತು ವೈದ್ಯಕೀಯ ಕೋರ್ಸ್‌ಗಳಿಗೆ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೂ ಶೇ. 100 ರಷ್ಟು ಸರ್ಕಾರವು ನಿಗದಿಪಡಿಸಿದ ಶುಲ್ಕವನ್ನು ನೀಡಲು ಬೇಡಿಕೆ ಬಂದಿರುವ ಹಿನ್ನೆಲೆಯಲ್ಲಿ 2016-17ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ.

"2016-17ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಹೆಚ್ಚು ಮತ್ತು ರೂ.10.00 ಲಕ್ಷಗಳಿಗಿಂತ ಒಳಗಿರುವ ಸಿ.ಇ.ಟಿ. ಮೂಲಕ ತಾಂತ್ರಿಕ ಮತ್ತು ವೈದ್ಯಕೀಯ ಕೋರ್ಸ್‌ಗಳಿಗೆ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೂ ಸಹ ಶೇ.100 ರಷ್ಟು ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಗಳಿಂದ ಮರುಪಾವತಿಸಲಾಗುವುದು".

ಮೇಲ್ಕಂಡ ಆಯವ್ಯಯದ ಘೋಷಣೆಯನ್ನು ಅನುಷ್ಠಾನಗೊಳಿಸಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. ಆರ್ಥಿಕ ಇಲಾಖೆಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ. ಆದ್ದರಿಂದ ಈ ಕೆಳಗಿನಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 178 ಪಕವಿ 2015, ಬೆಂಗಳೂರು, ದಿನಾಂಕ:30-06-2016**

ವಾರ್ಷಿಕ ವರಮಾನ 2.50 ಲಕ್ಷ ರೂ.ಗಳಿಗಿಂತ ಹೆಚ್ಚು ಮತ್ತು 10.00 ಲಕ್ಷ ರೂ.ಗಳಿಗಿಂತ ಒಳಗಿರುವ ಸಿ.ಇ.ಟಿ. ಮೂಲಕ ತಾಂತ್ರಿಕ ಮತ್ತು ವೈದ್ಯಕೀಯ ಕೋರ್ಸ್‌ಗಳಿಗೆ ಆಯ್ಕೆಯಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಶೇ.100 ರಷ್ಟು ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಗಳಿಂದ ಮಂಜೂರು ಮಾಡಿ ಪಾವತಿಸಲು / ಮರುಪಾವತಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆದೇಶಿಸಿದೆ.

**ಷರತ್ತುಗಳು:**

1. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ 2.50 ಲಕ್ಷ ರೂ.ಗಳಿಗಿಂತ ಹೆಚ್ಚು ಮತ್ತು 10.00 ಲಕ್ಷ ರೂ.ಗಳಿಗಿಂತ ಒಳಗಿರತಕ್ಕದ್ದು.
2. ಸಿ.ಇ.ಟಿ. ಮೂಲಕ ಎಂಬಿಬಿಎಸ್ & ಬಿಡಿಎಸ್, ಬಿ.ಇ/ಬಿ.ಟೆಕ್/ಬಿ.ಆರ್ಕ್ ಕೋರ್ಸ್‌ಗಳಿಗೆ ಆಯ್ಕೆಯಾಗುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಮಾತ್ರ ಸರ್ಕಾರಿ/ ಅನುದಾನಿತ/ಅನುದಾನರಹಿತ/ಖಾಸಗಿ ಮತ್ತು ಡೀಮ್ಡ್ ವಿಶ್ವವಿದ್ಯಾಲಯದ ಕಾಲೇಜು/ಸಂಸ್ಥೆಗಳಲ್ಲಿ ಪ್ರವೇಶ ಪಡೆದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಶೇ.100ರಷ್ಟು ಆಯಾ ಸಂಸ್ಥೆಗಳಿಗೆ ಸರ್ಕಾರ ನಿಗದಿ ಪಡಿಸಿದ ಶುಲ್ಕ ಪಡೆಯಲು ಅರ್ಹರಿರುತ್ತಾರೆ.
3. 2015-16ನೇ ಸಾಲಿನಲ್ಲಿ ಸಿ.ಇ.ಟಿ.ಯಿಂದ ಆಯ್ಕೆಯಾಗಿ ವ್ಯಾಸಂಗ ಮಾಡುತ್ತಿರುವ ಎಂಬಿಬಿಎಸ್, ಬಿಡಿಎಸ್, ಬಿ.ಇ., ಬಿ.ಟೆಕ್ ಮತ್ತು ಬಿ.ಆರ್ಕ್ ವಿದ್ಯಾರ್ಥಿಗಳು 2ನೇ ವರ್ಷಕ್ಕೆ ಅರ್ಹತೆ ಪಡೆದು ವ್ಯಾಸಂಗ ಮಾಡುತ್ತಿರುವವರಿಗೂ ಸಹ 2016-17ನೇ ಸಾಲಿನಿಂದ ಶೇ.100 ರಷ್ಟು ಶುಲ್ಕ ಪಡೆಯಲು ಅರ್ಹರಿರುತ್ತಾರೆ.

4. ಸಿ.ಇ.ಟಿ. ಮೂಲಕ ಪ್ರವೇಶ ಪಡೆಯುವ ಮೇಲ್ಕಂಡ ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳು ಮೂಲ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದಲ್ಲಿ ಅವರುಗಳಿಂದ ಶುಲ್ಕ ಪಾವತಿಸಿಕೊಳ್ಳದೇ ಪ್ರವೇಶ ನೀಡತಕ್ಕದ್ದು.

5. (ಎ) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ ಇವರು ಎಂಬಿಬಿಎಸ್ & ಬಿಡಿಎಸ್ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಂಜೂರಾತಿ ಮತ್ತು ಪಾವತಿಸುವ / ಮರು ಪಾವತಿಸುವ ಪ್ರಾಧಿಕಾರ.

   (ಬಿ) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ಬಿ.ಇ/ಬಿ.ಟೆಕ್/ಬಿ.ಆರ್ಕ್ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಂಜೂರಾತಿ ಮತ್ತು ಪಾವತಿಸುವ / ಮರು ಪಾವತಿಸುವ ಪ್ರಾಧಿಕಾರ.

6. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ರಡಿಯಲ್ಲಿ ವೈದ್ಯಕೀಯ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳಿಗೆ ಒದಗಿಸಿದ ಅನುದಾನದಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿ/ಮರುಪಾವತಿಗೆ ತಗಲುವ ವೆಚ್ಚವನ್ನು ಭರಿಸತಕ್ಕದ್ದು.

7. ಸರ್ಕಾರಿ ಆದೇಶ ಸಂಖ್ಯೆ:ಸಕಇ 178 ಪಕವಿ 2015 ದಿನಾಂಕ:31-01-2015ರಲ್ಲಿ ಇರುವ ಇತರ ಷರತ್ತುಗಳು ಯಥಾವತ್ತಾಗಿ ಅನ್ವಯಿಸುತ್ತವೆ.

**ಈ ಆದೇಶ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 401 ವೆಚ್ಚ-3/16 ದಿನಾಂಕ: 21.5.2016ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
30/6/16
(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ್ರ).
ಸಮಾಜ ಕಲ್ಯಾಣ ಇಲಾಖೆ.

<u>ಪ್ರತಿಯನ್ನು:</u>

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ ಸರ್ಕಾರ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು
4) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
5) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು
6) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
7) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
8) ಎಲ್ಲಾ ಜಿಲ್ಲಾಧಿಕಾರಿಗಳಿಗೆ.
9) ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
10) ಎಲ್ಲಾ ಜಿಲ್ಲೆಗಳ ಜಂಟಿ/ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ
11) ಎಲ್ಲಾ ಜಿಲ್ಲೆಗಳ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಯೋಜನೆ/ಜಿಲ್ಲಾ ಪರಿಶಿಷ್ಟ ಪಂಗಡಗಳ ಕಲ್ಯಾಣಾಧಿಕಾರಿಗಳು
12) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ
13) ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
14) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.